# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1379 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪಿ.ಆರ್.ರಮೇಶ್<br>(ನಾಮನಿರ್ದೇಶನ ಹೊಂದಿರುವವರು) |
| ಉತ್ತರಿಸಬೇಕಾದ ದಿನಾಂಕ | 24.12.2021 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ (ನೀಟ್/ಸಿಇಟಿ ತೇರ್ಗಡೆಯಾದ) ಕಾಲೇಜು ಶಿಕ್ಷಣ ಶುಲ್ಕವನ್ನು ಸರ್ಕಾರ ದಿಂದ ಭರಿಸಲು ಯಾವುದಾದರೂ ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಕಳೆದ 5 ವರ್ಷಗಳಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿಗಳು ಸದರಿ ಯೋಜನೆಯ ಫಲಾನು ಭವಿಗಳಾಗಿದ್ದರೆ; (ಜಿಲ್ಲಾವಾರು ವಿವರ ನೀಡುವುದು) ಯೋಜನೆಗಳು ಜಾರಿಯಲ್ಲಿಲ್ಲದಿದ್ದಲ್ಲಿ ಸರ್ಕಾರದ ಕ್ರಮವೇನು; | **ಹಿಂದುಳಿದ ವರ್ಗಗಳ ಆಯುಕ್ತಾಲಯ**<br>ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ಉನ್ನತ ಶಿಕ್ಷಣ (ನೀಟ್-ಸಿಇಟಿ ತೇರ್ಗಡೆಯಾದ) ವ್ಯಾಸಂಗ ಮಾಡುತ್ತಿರುವ ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಶುಲ್ಕ ವಿನಾಯಿತಿ ಯೋಜನೆಯನ್ನು ಅನುಷ್ಠಾನ ಗೊಳಿಸಲಾಗುತ್ತಿರುತ್ತದೆ.<br>ಕಳೆದ 5 ವರ್ಷಗಳಲ್ಲಿ ಶುಲ್ಕ ವಿನಾಯಿತಿ ಯೋಜನೆಯಡಿ ಶುಲ್ಕ ವಿನಾಯಿತಿ ಪಡೆದ (ನೀಟ್/ಸಿಇಟಿ ತೇರ್ಗಡೆಯಾದ) ವಿದ್ಯಾರ್ಥಿಗಳ ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿರುತ್ತದೆ.<br>**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**<br>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭವಿವೃದ್ಧಿ ನಿಗಮದಿಂದ ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಸಿಇಟಿ ಮುಖಾಂತರ ಪ್ರವೇಶ ಹೊಂದಿದಲ್ಲಿ ಅವರ ವ್ಯಾಸಂಗವನ್ನು ಮುಂದುವರೆಸಲು ವಾರ್ಷಿಕ ಗರಿಷ್ಠ ರೂ.1.00 ಲಕ್ಷಗಳಂತೆ ಶೇಕಡ 2%ರ ಬಡ್ಡಿದರದಲ್ಲಿ ವ್ಯಾಸಂಗದ ಅವಧಿಗೆ ಗರಿಷ್ಠ 5 ಕಂತುಗಳವರೆಗೆ ಸಾಲ ಮಂಜೂರು ಮಾಡಲಾಗುತ್ತಿದೆ. ಕಳೆದ 5 ವರ್ಷಗಳಲ್ಲಿ ಒಟ್ಟು 7715 ವಿದ್ಯಾರ್ಥಿಗಳು ಸದರಿ ಯೋಜನೆಯಲ್ಲಿ ಫಲಾನುಭವಿಗಳಾಗಿದ್ದಾರೆ. ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.<br>**ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ**<br>ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ರಾಜ್ಯದಲ್ಲಿ ಹಿಂದುಳಿದ ವರ್ಗಗಳಿಗೆ ಸೇರಿದ ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಸಿಇಟಿ ಮುಖಾಂತರ ಪ್ರವೇಶ ಹೊಂದಿದಲ್ಲಿ ಅವರ ವ್ಯಾಸಂಗವನ್ನು ಮುಂದುವರೆಸಲು ವಾರ್ಷಿಕ ಗರಿಷ್ಠ ರೂ.1.00 ಲಕ್ಷಗಳಂತೆ ಶೇ. 2% ಬಡ್ಡಿದರದಲ್ಲಿ ವ್ಯಾಸಂಗದ ಅವಧಿಗೆ ಗರಿಷ್ಠ 5 ಕಂತುಗಳವರೆಗೆ ಸಾಲ ಮಂಜೂರು ಮಾಡಲಾಗುತ್ತಿದೆ. ಈ ನಿಗಮವು 2019-20ನೇ |